ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 18/11/20

## ಸಂಸತ್ ಚಳಿಗಾಲ-ಬಜೆಟ್ ಅಧಿವೇಶನ ವಿಲೀನ ಸಾಧ್ಯತೆ



ನವದೆಹಲಿ: ಕರೋನಾ ಮಹಾಮಾರಿಯ ಕಾರಣ ಸಂಸತ್‌ನ ಚಳಿಗಾಲ ಮತ್ತು ಬಜೆಟ್ ಅಧಿವೇಶನ ವಿಲೀನಗೊಳ್ಳುವ ಸಾಧ್ಯತೆ ಇದೆ. ಈ ವರ್ಷ ಎರಡು ಅಧಿವೇಶನ ಮೊಟಕುಗೊಳ್ಳಲು ಕಾರಣವಾದ ಈ ಜಾಡ್ಯ, ಈಗ ಚಳಿಗಾಲದ ಅಧಿವೇಶನ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಸಾಮಾನ್ಯವಾಗಿ ನವೆಂಬರ್‌ನ ಮೂರನೇ ವಾರದಲ್ಲಿ ಚಳಿಗಾಲದ ಅಧಿವೇಶನ ಪ್ರಾರಂಭವಾಗುತ್ತದಾದರೂ, ಕೇಂದ್ರ ಸರ್ಕಾರ ಈ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಕೈಗೊಂಡಿಲ್ಲ. ದೆಹಲಿಯಲ್ಲಿ ಕರೋನಾ ಪ್ರಕರಣಗಳು ದಿನೇದಿನೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಚಳಿಗಾಲದ ಅಧಿವೇಶನವನ್ನು ಕರೆಯದಿರಲು ಹಾಗೂ ನೇರವಾಗಿ ಜನವರಿ ಅಂತ್ಯಕ್ಕೆ ಬಜೆಟ್ ಅಧಿವೇಶನಕ್ಕೆ ಹೋಗಲು ಕೇಂದ್ರ ಚಿಂತಿಸುತ್ತಿದೆ ಎಂದು ಕೆಲ ಮೂಲಗಳು ತಿಳಿಸಿವೆ.